ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಗ್ರಾಮ ಪಂಚಾಯತಿಗಳಲ್ಲಿ ಮನೆಗಳನ್ನು ಹಂಚಿಕೆ ಮಾಡುವ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ. ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

346 (339) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮ ಪಂಚಾಯತಿಗಳಲ್ಲಿ ವಸತಿ ಯೋಜನೆಗಳ ಫಲಾನುಭವಿಗಳ ಆಯ್ಕೆಯಲ್ಲಿನ ನಿಬಂಧನೆ ಹಾಗೂ ನಿಯಮಗಳೇನು ; (ವಿವರ ನೀಡುವುದು)

(ಆ) ಒಬ್ಬ ಫಲಾನುಭವಿಯ ಎರಡೂ ಮೂರು ಬಾರಿ ಬೇರೆ ಬೇರೆ ಆಶ್ರಯ ಯೋಜನೆಗಳಲ್ಲಿ ಮನೆಗಳನ್ನು ಪಡೆದಿದ್ದರೆ ಇದಕ್ಕೆ ಹೊಣೆಗಾರರು ಯಾರು ; ಅವರಿಂದ ಅನುದಾನವನ್ನು ವಾಪಸ್ ಪಡೆಯಲು ಇರುವ ನಿಯಮಗಳೇನು ;

(ಇ) ಗ್ರಾಮ ಪಂಚಾಯತಿ ಸದಸ್ಯ ಅಥವಾ ಮಾಜಿ ಸದಸ್ಯರೇ ಎರಡೂ ಮೂರು ಬಾರಿ ಬೇರೆ ಬೇರೆ ಆಶ್ರಯ ಯೋಜನೆಗಳಲ್ಲಿ ಮನೆಗಳನ್ನು ಪಡೆದಿದ್ದಲ್ಲಿ ಅವರ ಮೇಲೆ ತೆಗೆದುಕೊಳ್ಳುವ ಕಾನೂನು ಕ್ರಮಗಳೇನು; (ವಿವರ ನೀಡುವುದು)

(ಈ) ಈ ಕುರಿತಾಗಿ ರಾಜ್ಯದಲ್ಲಿ ಸರ್ಕಾರದ ಗಮನಕ್ಕೆ ಬಂದ ಪ್ರಕರಣಗಳು ಎಷ್ಟು ; ಅಂತಹ ಪ್ರಕರಣ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)